# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 33
2. ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
3. ಉತ್ತರಿಸುವ ದಿನಾಂಕ : 04.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೃಷಿ ಉತ್ಪನ್ನ ಮಾರುಕಟ್ಟೆ ಕಾಯ್ದೆ ತಿದ್ದುಪಡಿಯಿಂದ ಮಾರುಕಟ್ಟೆಯಲ್ಲಿ ವಹಿವಾಟು ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | -ಬಂದಿದೆ- |
| (ಆ) | ಈ ಕಾಯ್ದೆ ತಿದ್ದುಪಡಿಯಿಂದ ರೈತರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸಂಪೂರ್ಣ ವಿವರ ನೀಡುವುದು; | - ಬಂದಿದೆ -<br>ರಾಜ್ಯ ಸರ್ಕಾರವು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2), ಕಲಂ 8(3) ಹಾಗೂ ಕಲಂ 117ಕ್ಕೆ ಕಾಯ್ದೆ ಸಂ:59/2020ರ ಮೂಲಕ ಕೈಗೊಂಡ ತಿದ್ದುಪಡಿ ನಂತರದ ಪ್ರತಿಕೂಲ ಪರಿಣಾಮಗಳು ಕೆಳಕಂಡಂತಿರುತ್ತವೆ;<br>➢ ಮಾರುಕಟ್ಟೆ ಪ್ರಾಂಗಣಗಳನ್ನು ಹೊರತುಪಡಿಸಿದ ಮಾರುಕಟ್ಟೆ ಕ್ಷೇತ್ರದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳ ನಿಯಂತ್ರಣಕ್ಕೆ ಯಾವುದೇ ವ್ಯವಸ್ಥೆ ಇಲ್ಲದೆ ರೈತರು ಶೋಷಣೆಗೆ ಒಳಗಾಗುವ ಸಾಧ್ಯತೆಗಳು ಹೆಚ್ಚಾಗಿವೆ.<br>➢ ಮಾರುಕಟ್ಟೆ ಪ್ರಾಂಗಣದ ಹೊರಗಡೆ ಆನ್‌ಲೈನ್ ವ್ಯವಸ್ಥೆ ಇಲ್ಲದೆ ಇರುವುದರಿಂದ ರೈತರು ಬೆಳೆದ ಉತ್ಪನ್ನಗಳಿಗೆ ಸ್ಪರ್ಧಾತ್ಮಕತೆ ಏರ್ಪಡದೆ ಯೋಗ್ಯ ಧಾರಣೆ ಸಿಗುವ ಸಾಧ್ಯತೆಗಳು ಕಡಿಮೆಯಾಗಿದೆ.<br>➢ ರೈತರಿಗೆ ತಾವು ಮಾರಾಟ ಮಾಡಿದ ಉತ್ಪನ್ನದ ಮೌಲ್ಯ ಪಾವತಿ ಖಾತರಿ ವ್ಯವಸ್ಥೆ ಇಲ್ಲದಂತಾಗಿದೆ.<br>ಮಾರುಕಟ್ಟೆ ಪ್ರಾಂಗಣದ ಹೊರಗಡೆ ನಡೆಯುವ ವಹಿವಾಟಿಗೆ ಸಂಬಂಧಿಸಿದಂತೆ ರೈತರಿಗೆ ತೂಕದಲ್ಲಿ ಮೋಸ, ತಕ್ಷಣ ಮಾರಾಟದ ನಂತರ ಹಣ ಪಾವತಿಗೆ ವಿವಾದಗಳು ಉದ್ಭವಿಸಿದಲ್ಲಿ ಮಾರುಕಟ್ಟೆ ಸಮಿತಿಗಳು ಇತ್ಯರ್ಥಪಡಿಸಲು ಅವಕಾಶವಿರುವುದಿಲ್ಲ. |
| (ಇ) | ರೈತರಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಒದಗಿಸುವ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಜ್ಯ ಸರ್ಕಾರವು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ರಡಿ ರಾಜ್ಯದ ರೈತರ ಹಿತಾಸಕ್ತಿಗೆ ಪೂರಕವಾದ ಮಾರಾಟ ವ್ಯವಸ್ಥೆ ಕಲ್ಪಿಸುವುದು ಹಾಗೂ ಅವರ ಉತ್ಪನ್ನಗಳಿಗೆ ಸ್ಪರ್ಧಾತ್ಮಕ ಧಾರಣೆ ದೊರೆಯುವ ನಿಟ್ಟಿನಲ್ಲಿ 167 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳನ್ನು ಸ್ಥಾಪಿಸಿದೆ.<br>ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಮಾರುಕಟ್ಟೆ ಪ್ರಾಂಗಣಗಳಲ್ಲಿ ವ್ಯಾಪಾರ ವಹಿವಾಟಿಗೆ ಪೂರಕವಾದ ಸೌಲಭ್ಯಗಳಾದ ಆಂತರಿಕ ರಸ್ತೆ, ಕುಡಿಯುವ ನೀರಿನ ವ್ಯವಸ್ಥೆ, |

...2

| | | |
|---|---|---|
| | | ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಮಾರುಕಟ್ಟೆ ಪ್ರಾಂಗಣಗಳಲ್ಲಿ ವ್ಯಾಪಾರ ವಹಿವಾಟಿಗೆ ಪೂರಕವಾದ ಸೌಲಭ್ಯಗಳಾದ ಆಂತರಿಕ ರಸ್ತೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ, ಹರಾಜುಕಟ್ಟೆಗಳು, ಬ್ಯಾಂಕಿಂಗ್ ಸೌಲಭ್ಯ ಗೋದಾಮುಗಳು, ರಾಜ್ಯದ ಹಾಗೂ ಇತರೆ ಪ್ರದೇಶಗಳಲ್ಲಿನ ಕೃಷಿ ಮಾರುಕಟ್ಟೆಗಳಲ್ಲಿ ಉತ್ಪನ್ನಗಳ ಆವಕ ಹಾಗೂ ಧಾರಣೆ ಮಾಹಿತಿ ನೀಡುವ ವ್ಯವಸ್ಥೆ, ಎಲೆಕ್ಟ್ರಾನಿಕ್ ತೂಕದ ಯಂತ್ರ, ವೇಬ್ರಿಡ್ಜ್, ರೈತ ಭವನ, ಉಪಹಾರ ಗೃಹ, ಶೌಚಾಲಯ, ಪೋಸ್ಟ್ ಆಫೀಸ್, ಕ್ಲೀನಿಂಗ್ ಮತ್ತು ಗ್ರೇಡಿಂಗ್ ಯೂನಿಟ್ಸ್, ಸಂಸ್ಕರಣ ಘಟಕಗಳು, ಅಸ್ಸೆಯಿಂಗ್ ಲ್ಯಾಬ್ಸ್, ಶೀತಲ ಗೃಹ, ಸೈಲೋಸ್ ಮುಂತಾದ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.<br><br>ಉಗ್ರಾಣಗಳಲ್ಲಿ ರೈತರು ತಮ್ಮ ಉತ್ಪನ್ನಗಳನ್ನು ದಾಸ್ತಾನು ಇಟ್ಟು ಅಡಮಾನ ಸಾಲ ಪಡೆಯುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.<br><br>ವ್ಯಾಪಾರ ವಹಿವಾಟಿನಲ್ಲಿ ಪಾರದರ್ಶಕತೆ, ಇ-ಟೆಂಡರ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಖರೀದಿದಾರರು ಭಾಗವಹಿಸುವ ಮೂಲಕ ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಯೋಗ್ಯ ಹಾಗೂ ಸ್ಪರ್ಧಾತ್ಮಕ ಧಾರಣೆ ದೊರೆಯುವಂತೆ ಮಾಡಲು ರಾಜ್ಯದಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಆನ್‌ಲೈನ್ ಏಕೀಕೃತ ಮಾರುಕಟ್ಟೆ ವೇದಿಕೆ ಅಳವಡಿಸಲಾಗಿದೆ.<br><br>ರೈತರಿಗೆ ಮಾರುಕಟ್ಟೆ ಪ್ರಾಂಗಣಗಳಲ್ಲದೇ ಬದಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ದೃಷ್ಟಿಯಿಂದ ಖಾಸಗಿ ಮಾರುಕಟ್ಟೆಗಳು, ನೇರ ಖರೀದಿ ಕೇಂದ್ರಗಳು, ರೈತ-ಗ್ರಾಹಕ ಮಾರುಕಟ್ಟೆಗಳ ಸ್ಥಾಪನೆಗೆ ಅವಕಾಶಿಸಲಾಗಿದೆ.<br><br>ಮಾರುಕಟ್ಟೆಯಲ್ಲಿ ಧಾರಣೆ ಕುಸಿತ ಕಂಡ ಸಂದರ್ಭದಲ್ಲಿ ಸರ್ಕಾರವು ಬೆಂಬಲ ಬೆಲೆಯನ್ನು ಘೋಷಿಸಿ ಗೊತ್ತುಪಡಿಸಿದ ಏಜೆನ್ಸಿಗಳ ಮೂಲಕ ರೈತರಿಂದ ಉತ್ಪನ್ನಗಳನ್ನು ಖರೀದಿ ಮಾಡಲು ಆವರ್ತ ನಿಧಿ ಸ್ಥಾಪಿಸಲಾಗಿದೆ. |

ಸಂಖ್ಯೆ: ಸಿಒ 116 ಎಂಆರ್‌ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು